File No.AGRI-AMS/18/2019-AGRI_PLAN_B-AGRICULTURE Secretariat-Part(1)

# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಕೇಂದ್ರ ಪುರಸ್ಕೃತ ರಾಷ್ಟ್ರೀಯ ಕೃಷಿ ವಿಕಾಸ ಯೋಜನೆಯಡಿ 2019-20ನೇ ಸಾಲಿನ "Additional Fodder Development Programme (AFDP)" ಕಾರ್ಯಕ್ರಮ ಅನುಷ್ಠಾನಕ್ಕೆ ಸಂಬಂಧಿಸಿದಂತೆ ಮೊದಲನೇ ಕಂತಿನ ಅನುದಾನ ಬಿಡುಗಡೆ ಮಾಡುವ ಬಗ್ಗೆ

ಓದಲಾಗಿದೆ: 1. ಸರ್ಕಾರದ ಆದೇಶ ಸಂಖ್ಯೆ: ಕೃಇ 41 ಕೃಯೋಕಾ 2019, ದಿನಾಂಕ: 02.04.2019.
2. ದಿನಾಂಕ: 30.04.2019ರಂದು ನಡೆದ RKVY ರಾಜ್ಯ ಮಟ್ಟದ ಮಂಜೂರಾತಿ ಸಮಿತಿ ಸಭೆಯ ನಡವಳಿ.
3. ಕೇಂದ್ರ ಸರ್ಕಾರದ ಪತ್ರ ಸಂಖ್ಯೆ: 2-1/2018-RFS-II, ದಿನಾಂಕ: 27.05.2019.
4. ಕೇಂದ್ರ ಸರ್ಕಾರದ ಪತ್ರ ಸಂಖ್ಯೆ: 1-12/2019-RKVY, ದಿನಾಂಕ: 16.08.2019.
5. ಆರ್ಥಿಕ ಇಲಾಖೆಯ ಜಮಾ ದೃಢೀಕರಣ ಪತ್ರ ಸಂಖ್ಯೆ: FD 20 BGL 2019 ದಿನಾಂಕ: 26.08.2019.
6. ಸರ್ಕಾರದ ಆದೇಶ ಸಂಖ್ಯೆ: ಕೃಇ 18 ಕೃಉಇ 2019, ದಿನಾಂಕ: 30.07.2019.
7. ಸರ್ಕಾರದ ಆದೇಶ ಸಂಖ್ಯೆ: ಕೃಇ 18 ಕೃಉಇ 2019, ದಿನಾಂಕ: 05.09.2019.
8. ಸರ್ಕಾರದ ಆದೇಶ ಸಂಖ್ಯೆ: ಕೃಇ 18 ಕೃಉಇ 2019, ದಿನಾಂಕ: 07.09.2019.
9. ಕೃಷಿ ಆಯುಕ್ತರ ಪ್ರಸ್ತಾವನೆ ಸಂಖ್ಯೆ: RKVY/GOK/2019-20, ದಿನಾಂಕ: 23.08.2019.

*****

ಪ್ರಸ್ತಾವನೆ:

2019-20ನೇ ಸಾಲಿನ ಆಯವ್ಯಯ ಸಂಪುಟ-3ರಲ್ಲಿ ಕೇಂದ್ರ ಪುರಸ್ಕೃತ ಯೋಜನೆ ರಾಷ್ಟ್ರೀಯ ಕೃಷಿ ವಿಕಾಸ ಯೋಜನೆ ಲೆಕ್ಕ ಶೀರ್ಷಿಕೆ: 2401-00-800-1-57 ಅಡಿ ಒಟ್ಟು ರೂ. 198.00 ಕೋಟಿಗಳನ್ನು ನಿಗದಿಪಡಿಸಲಾಗಿದೆ.

ಮೇಲೆ ಓದಲಾದ (1)ರ ಸರ್ಕಾರದ ಆದೇಶದಲ್ಲಿ, ಕೇಂದ್ರ ಪುರಸ್ಕೃತ ರಾಷ್ಟ್ರೀಯ ಕೃಷಿ ವಿಕಾಸ ಯೋಜನೆಯನ್ನು 2019-20ನೇ ಸಾಲಿಗೆ ಮುಂದುವರೆಸಿ ಅನುಷ್ಠಾನಗೊಳಿಸಲು ಅನುಮೋದನೆ ನೀಡಲಾಗಿದೆ.

ಮೇಲೆ ಓದಲಾದ (2)ರ ನಡವಳಿಯನ್ವಯ ದಿನಾಂಕ: 30.04.2019ರಂದು ನಡೆದ ರಾಜ್ಯ ಮಟ್ಟದ ಮಂಜೂರಾತಿ ಸಮಿತಿ ಸಭೆಯಲ್ಲಿ ರಾಷ್ಟ್ರೀಯ ಕೃಷಿ ವಿಕಾಸ ಯೋಜನೆಯಡಿ "Additional Fodder Development Programme (AFDP)" ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲು ಅನುಮೋದನೆ ನೀಡಲಾಗಿರುತ್ತದೆ.

ಮೇಲೆ ಓದಲಾದ (3)ರ ಕೇಂದ್ರ ಸರ್ಕಾರದ ಪತ್ರದಲ್ಲಿ, ರಾಷ್ಟ್ರೀಯ ಕೃಷಿ ವಿಕಾಸ ಯೋಜನೆಯಡಿಯ "Additional Fodder Development Programme (AFDP)" ಕಾರ್ಯಕ್ರಮಕ್ಕೆ ಕೇಂದ್ರದ ಪಾಲು ರೂ. 2.50 ಕೋಟಿಗಳ ವಾರ್ಷಿಕ ಕ್ರಿಯಾ ಯೋಜನೆಗೆ ಅನುಮೋದನೆ ನೀಡಲಾಗಿದೆ.

ಮೇಲೆ ಓದಲಾದ (4)ರ ಕೇಂದ್ರ ಸರ್ಕಾರದ ಪತ್ರದಲ್ಲಿ, 2019-20ನೇ ಸಾಲಿನ ರಾಷ್ಟ್ರೀಯ ಕೃಷಿ ವಿಕಾಸ ಯೋಜನೆಯಡಿ "Additional Fodder Development Programme (AFDP)" ಕಾರ್ಯಕ್ರಮ ಅನುಷ್ಠಾನಕ್ಕೆ ಮೊದಲನೇ ಕಂತಿನ ಅನುದಾನವಾಗಿ ರೂ. 1.25 ಕೋಟಿಗಳನ್ನು ಬಿಡುಗಡೆ ಮಾಡಿ ರಾಜ್ಯದ ಪಾಲಿನ ಶೇ. 40ರಷ್ಟು ಅನುದಾನವನ್ನು ಒದಗಿಸಿಕೊಂಡು ವೆಚ್ಚ ಭರಿಸಲು ತಿಳಿಸಿರುತ್ತದೆ.

ಮೇಲೆ ಓದಲಾದ (5)ರ ಆರ್ಥಿಕ ಇಲಾಖೆಯ ಜಮಾ ದೃಢೀಕರಣ ಪತ್ರದಲ್ಲಿ ಕೇಂದ್ರ ಸರ್ಕಾರದಿಂದ ಬಿಡುಗಡೆಯಾದ ರೂ. 1.25 ಕೋಟಿಗಳು ರಾಜ್ಯದ ಬೊಕ್ಕಸಕ್ಕೆ ಜಮೆಯಾದ ಕುರಿತು ದೃಢೀಕರಿಸಲಾಗಿದೆ.

ಮೇಲೆ ಓದಲಾದ (6)ರ ಸರ್ಕಾರದ ಆದೇಶದಲ್ಲಿ, ಕೇಂದ್ರ ಪುರಸ್ಕೃತ ರಾಷ್ಟ್ರೀಯ ಕೃಷಿ ವಿಕಾಸ ಯೋಜನೆಗೆ ಸಂಬಂಧಿಸಿದಂತೆ ರಾಜ್ಯ ಮಟ್ಟದ ಮಂಜೂರಾತಿ ಸಮಿತಿ ಸಭೆಯಲ್ಲಿ 2019-20ನೇ ಸಾಲಿಗೆ ಕೇಂದ್ರ ಸರ್ಕಾರದಿಂದ ನಿಗಧಿಯಾಗಿರುವಂತೆ ವಿವಿಧ ಇಲಾಖೆ/ನಿಗಮ ಮಂಡಳಿ/ವಿಶ್ವವಿದ್ಯಾಲಯಗಳಿಗೆ ಒಟ್ಟು ರೂ. 298.93 ಕೋಟಿ ಅನುದಾನದ ಮಿತಿಗೊಳಪಟ್ಟು ಕಾರ್ಯಕ್ರಮ ಅನುಷ್ಠಾನಗೊಳಿಸಲು ಆಡಳಿತಾತ್ಮಕ ಅನುಮೋದನೆ ನೀಡುತ್ತಾ, ಮೊದಲನೇ ಕಂತಿನ ಅನುದಾನವಾಗಿ ರೂ. 81.92 ಕೋಟಿಗಳನ್ನು ಬಿಡುಗಡೆ ಮಾಡಿ ಮಂಜೂರಾತಿ ನೀಡಲಾಗಿದೆ.

ಮೇಲೆ ಓದಲಾದ (7)ರ ಸರ್ಕಾರದ ಆದೇಶದಲ್ಲಿ, 2019-20ನೇ ಸಾಲಿನಲ್ಲಿ ಕೇಂದ್ರ ಪುರಸ್ಕೃತ ರಾಷ್ಟ್ರೀಯ ಕೃಷಿ ವಿಕಾಸ ಯೋಜನೆಯಡಿಯ "Crop Diversification Programme (CDP) ಕಾರ್ಯಕ್ರಮಕ್ಕೆ ಮೊದಲನೇ ಕಂತಿನ ಅನುದಾನವಾಗಿ ರೂ. 133.33 ಲಕ್ಷಗಳನ್ನು ಬಿಡುಗಡೆ ಮಾಡಿ ಮಂಜೂರಾತಿ ನೀಡಲಾಗಿದೆ.

ಮೇಲೆ ಓದಲಾದ (8)ರ ಸರ್ಕಾರದ ಆದೇಶದಲ್ಲಿ, 2019-20ನೇ ಸಾಲಿನಲ್ಲಿ ಕೇಂದ್ರ ಪುರಸ್ಕೃತ ರಾಷ್ಟ್ರೀಯ ಕೃಷಿ ವಿಕಾಸ ಯೋಜನೆಯಡಿ 2017-18 ಮತ್ತು 2018-19ನೇ ಸಾಲಿನಲ್ಲಿ ಉಳಿಕೆಯಾಗಿ ಮರುಮೌಲ್ಯೀಕರಣಗೊಂಡ ಅನುದಾನ ರೂ. 8.84 ಕೋಟಿಗಳನ್ನು 2019-20ನೇ ಸಾಲಿನಲ್ಲಿ ವೆಚ್ಚ ಭರಿಸಲು ಮಂಜೂರಾತಿ ನೀಡಲಾಗಿದೆ.

ಮೇಲೆ ಓದಲಾದ (9)ರ ಕೃಷಿ ಆಯುಕ್ತರ ಪ್ರಸ್ತಾವನೆಯಲ್ಲಿ ಕೇಂದ್ರ ಪುರಸ್ಕೃತ ರಾಷ್ಟ್ರೀಯ ಕೃಷಿ ವಿಕಾಸ ಯೋಜನೆಯಡಿಯ "Additional Fodder Development Programme (AFDP)" ಕಾರ್ಯಕ್ರಮಕ್ಕೆ ಕೇಂದ್ರ ಸರ್ಕಾರವು ಮೊದಲನೇ ಕಂತಿನ ಅನುದಾನವಾಗಿ ರೂ. 1.25 ಕೋಟಿಗಳನ್ನು ಬಿಡುಗಡೆ ಮಾಡಿದ್ದು, ಸದರಿ ಅನುದಾನಕ್ಕೆ ರಾಜ್ಯದ ರಾಜ್ಯದ ಪಾಲಿನ ಶೇ. 40ರಷ್ಟು ಅನುದಾನ ರೂ. 0.83 ಕೋಟಿಗಳನ್ನು ಸೇರಿಸಿ ಒಟ್ಟಾರೆ ರೂ. 2.08 ಕೋಟಿಗಳ ಅನುದಾನವನ್ನು ಸದರಿ ಕಾರ್ಯಕ್ರಮವನ್ನು ಅನುಷ್ಠಾನ ಮಾಡುತ್ತಿರುವ ಪಶುಸಂಗೋಪನೆ ಇಲಾಖೆಗೆ ಉಪ ಶೀರ್ಷಿಕೆ: 106ರಡಿ ಬಿಡುಗಡೆ ಮಾಡುವಂತೆ ಕೋರಿರುತ್ತಾರೆ.

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಕೃಇ 18 ಕೃಉಇ 2019 (ಭಾಗ-1), ಬೆಂಗಳೂರು, ದಿನಾಂಕ: 09.09.2019.**

ಕೇಂದ್ರ ಪುರಸ್ಕೃತ ರಾಷ್ಟ್ರೀಯ ಕೃಷಿ ವಿಕಾಸ ಯೋಜನೆಯಡಿಯ "Additional Fodder Development Programme (AFDP)" ಕಾರ್ಯಕ್ರಮಕ್ಕೆ ಸಂಬಂಧಿಸಿದಂತೆ, ಕೇಂದ್ರ ಸರ್ಕಾರವು ಬಿಡುಗಡೆ ಮಾಡಿರುವ ಮೊದಲನೇ ಕಂತಿನ ರೂ. 1.25 ಕೋಟಿಗಳ ಅನುದಾನಕ್ಕೆ ಪೂರಕವಾಗಿ ರಾಜ್ಯ ಸರ್ಕಾರದ ಪಾಲಿನ ಶೇ. 40ರಷ್ಟು ಅನುದಾನ ರೂ. 0.83 ಕೋಟಿಗಳನ್ನು ಸೇರಿಸಿ ಒಟ್ಟು ರೂ. 2.08 ಕೋಟಿಗಳನ್ನು (ಎರಡು ಕೋಟಿ ಎಂಟು ಲಕ್ಷ ರೂಪಾಯಿಗಳು ಮಾತ್ರ) 2019-20ನೇ ಸಾಲಿನ ಆಯವ್ಯಯ ಲೆಕ್ಕ ಶೀರ್ಷಿಕೆ: 2401-00-800-1-57ರಡಿಯ ಉಪ ಶಿರ್ಷಿಕೆ: (106) ರಡಿ ಬಿಡುಗಡೆ ಮಾಡುತ್ತಾ ಕಾರ್ಯಕ್ರಮವನ್ನು ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆಯ ಮುಖಾಂತರ ಅನುಷ್ಠಾನಗೊಳಿಸಲು ಸರ್ಕಾರವು ಈ ಮೂಲಕ ಮಂಜೂರಾತಿ ನೀಡಿದೆ.

.3..

THE GRANTS FOR THE DEPARTMENTS WILL BE RELEASED UNDER THE HEAD OF ACCOUNT NO. 2401-00-800-1-57 TO THE CCO OF THE CONCERNED DEPARTMENTS/INSTITUTIONS/UNIVERSITIES. FURTHER, THE BILLS SUBMITTED BY DRAWING OFFICERS OF THE DEPARTMENTS/INSTITUTIONS/UNIVERSITIES SHALL BE COUNTERSIGNED BY THE COMMISSIONER FOR AGRICULTURE, BENGALURU.

ಕೃಷಿ ನಿರ್ದೇಶಕರು ಕೇಂದ್ರ ಸರ್ಕಾರವು ಆಗ್ಗಿಂದಾಗ್ಗೆ ಹೊರಡಿಸುವ ಮಾರ್ಗಸೂಚಿ ಅನುಸಾರ ಯೋಜನೆಯನ್ನು ಅನುಷ್ಠಾನಗೊಳಿಸತಕ್ಕದ್ದು.

ಈ ಆದೇಶವನ್ನು ಸರ್ಕಾರದ ಆದೇಶ ಸಂಖ್ಯೆ: ಎಫ್ ಡಿ/01/ಟಿಎಫ್ ಪಿ/2019, ದಿನಾಂಕ: 03.04.2019ರಲ್ಲಿ ಸರ್ಕಾರದ ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಲಾಗಿರುವ ಆರ್ಥಿಕ ಅಧಿಕಾರದ ಮೇರೆಗೆ ಹಾಗೂ ಆಂತರಿಕ ಆರ್ಥಿಕ ಸಲಹೆಗಾರರ ಟಿಪ್ಪಣಿ ಸಂಖ್ಯೆ: ಕೃಇ 16 ಆಂಆಸ 2019, ದಿನಾಂಕ: 06.09.2019ರಲ್ಲಿ ನೀಡಿರುವ ಸಹಮತಿ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

B S Nagarathnam

(ಬಿ.ಎಸ್. ನಾಗರತ್ನಮ್ಮ)
ಸರ್ಕಾರದ ಅಧೀನ ಕಾರ್ಯದರ್ಶಿ
ಕೃಷಿ ಇಲಾಖೆ (ಯೋಜನೆ)
09/9/19

ಇವರಿಗೆ:-

1. ಪ್ರಧಾನ ಮಹಾಲೇಖಪಾಲರು (ಜಿ&ಎಸ್ ಎಸ್ ಎ)/ (ಇ& ಆರ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು-01
2. ಪ್ರಧಾನ ಮಹಾಲೇಖಪಾಲರು ( ಎ & ಇ), ಕರ್ನಾಟಕ, ಬೆಂಗಳೂರು.
3. ಸರ್ಕಾರದ ಮುಖ್ಯ ಕಾರ್ಯದರ್ಶಿ, ಕರ್ನಾಟಕ ಸರ್ಕಾರ, ವಿಧಾನಸೌಧ, ಬೆಂಗಳೂರು.
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಮತ್ತು ಅಭಿವೃದ್ಧಿ ಆಯುಕ್ತರು, ವಿಧಾನಸೌಧ, ಬೆಂಗಳೂರು.
5. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
6. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ. ಬೆಂಗಳೂರು.
7. ಕೃಷಿ ಆಯುಕ್ತರು/ಕೃಷಿ ನಿರ್ದೇಶಕರು, ಶೇಷಾದ್ರಿ ರಸ್ತೆ, ಬೆಂಗಳೂರು.
8. ಆಯುಕ್ತರು/ ನಿರ್ದೇಶಕರು, ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆ, ಬೆಂಗಳೂರು.
9. ನಿರ್ದೇಶಕರು, ಖಜಾನೆ ಇಲಾಖೆ, ಬೆಂಗಳೂರು.
10. ಜಂಟಿ ನಿರ್ದೇಶಕರು, ರಾಜ್ಯ ಹುಜೂರು ಖಜಾನೆ, ಬೆಂಗಳೂರು.
11. ನಿರ್ದೇಶಕರು, TNMC, ಖನಿಜ ಭವನ, ಬೆಂಗಳೂರು.
12. ಸರ್ಕಾರದ ಉಪ ಕಾರ್ಯದರ್ಶಿ ಹಾಗೂ ಆಂತರಿಕ ಆರ್ಥಿಕ ಸಲಹೆಗಾರರು, ಕೃಷಿ ಮತ್ತು ತೋಟಗಾರಿಕೆ ಇಲಾಖೆ, ಬೆಂಗಳೂರು.
13. ಸರ್ಕಾರದ ಅಧೀನ ಕಾರ್ಯದರ್ಶಿ (FR & CC), ಆರ್ಥಿಕ ಇಲಾಖೆ, ಬೆಂಗಳೂರು.
14. ಸರ್ಕಾರದ ಅಧೀನ ಕಾರ್ಯದರ್ಶಿ (ವೆಚ್ಚ – 4&5), ಆರ್ಥಿಕ ಇಲಾಖೆ, ಬೆಂಗಳೂರು.
15. ಶಾಖೆಯ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.